ಸಿಸಿ ನಂ. 159/2022 ಪಿಡಬ್ಲೂ :1

ದಿನಾಂಕಃ 30-06-2023 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣೀಕರಿಸಲಾಯಿತು.

ಫಿರ್ಯಾದುದಾರ ಸಂಸ್ಥೆಯ ವ್ಯವಸ್ಥಾಪಕರ ಪ್ರಮಾಣೀಕೃತ ಹೇಳಿಕೆಯನ್ನು ಮುಖ್ಯ ವಿಚಾರಣೆ ಎಂದು ಹಾಗೂ ಸದರಿ ವ್ಯವಸ್ಥಾಪಕರನ್ನು ಪಿಡಬ್ಲ್ಯೂ-1 ಎಂದು ಪರಗಣಿಸಲಾಗಿದೆ .

**ಮುಂದುವರೆದ ಮುಖ್ಯ ವಿಚಾರಣೆಃ ಪಿರ್ಯಾದುದಾರರ ಪರವಾಗಿಃ ಶ್ರೀ ಪಿ ಜಿ ಎಚ್ ವಕೀಲರಿಂದಃ**

2. ಠರಾವಿನ ಯಥಾ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -1 ಎಂದು ಗುರುತಿಸಲಾಯಿತು. ಆರೋಪಿಯು ನೀಡಿದ ಚೆಕ್ ಹಾಜರು ಪಡಿಸಿದ್ದು ಅದನ್ನು ನಿಪಿ -2 ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿರುವ ಸಹಿ ಆರೋಪಿಯ ಸಹಿಯಾಗಿರುತ್ತದೆ . ಸದರಿ ಸಹಿಯನ್ನು ನಿಪಿ-2 ಎ ಎಂದು ಗುರುತಿಸಲಾಯಿತು. ಬ್ಯಾಂಕನವರು ಕೊಟ್ಟಿರುವ ಮೆಮೊವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ನಾವು ನಮ್ಮ ವಕೀಲರ ಮುಖಾಂತರ ಆರೋಪಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -4 ಎಂದು, ಅಂಚೆ ರಸೀದಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -5 ಎಂದು ಗುರುತಿಸಲಾಯಿತು. ಸ್ವಲ್ಪ ಹರಿದು ಹೋಗಿರುವ ಅಂಚೆ ಸ್ವೀಕೃತಿ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -6 ಎಂದು ಗುರುತಿಸಲಾಯಿತು. ಅಕೌಂಟ್ ಸ್ಟೇಟ್ ಮೆಂಟ್ ನ್ನು ಪ್ರಮಾಣ ಪತ್ರದೊಂದಿಗೆ ಹಾಜರು ಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ-7 ಎಂದು ಗುರುತಿಸಲಾಯಿತು. ಸಾಲದ ಅರ್ಜಿಯ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಸಾಲದ ಅರ್ಜಿಯ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಸಾಲದ ಅರ್ಜಿಯ ಯಥಾ ನಕಲನ್ನು ನಿಪಿ-8 ಎಂದು ಗುರುತಿಸಲಾಯಿತು . ಸಾಲ ಮಂಜೂರಾತಿ ತಿಳುವಳಿಕೆ ಪತ್ರದ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಸಾಲ

ಮಂಜುರಾತಿ ತಿಳುವಳಿಕೆ ಪತ್ರದ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಸಾಲ ಮಂಜೂರಾತಿ ತಿಳುವಳಿಕೆ ಪತ್ರದ ಯಥಾ ನಕಲನ್ನು ನಿಪಿ-9 ಎಂದು ಗುರುತಿಸಲಾಯಿತು . ಎರಡು ಜಾಮೀನುದಾರರ ಮಾಹಿತಿಯ ಯಥಾ ನಕಲುಗಳನ್ನು ಹಾಜರು ಪಡಿಸಿರುತ್ತೇನೆ . ಸದರಿ ಮಾಹಿತಿಯ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಮಾಹಿತಿಯ ಎರಡು ಯಥಾ ನಕಲುಗಳನ್ನು ನಿಪಿ-10 ಮತ್ತು 11 ಎಂದು ಗುರುತಿಸಲಾಯಿತು . ಸಾಲದ ಕರಾರು ಪತ್ರದ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಸಾಲದ ಕರಾರು ಪತ್ರದ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಸಾಲದ ಕರಾರು ಪತ್ರದ ಯಥಾ ನಕಲನ್ನು ನಿಪಿ-12 ಎಂದು ಗುರುತಿಸಲಾಯಿತು . ಡಿಮಾಂಡ್ ಪ್ರಾಮಿಸರಿ ನೋಟಿನ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಡಿಮಾಂಡ್ ಪ್ರಾಮಿಸರಿ ನೋಟಿನ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಡಿಮಾಂಡ್ ಪ್ರಾಮಿಸರಿ ನೋಟಿನ ಯಥಾ ನಕಲನ್ನು ನಿಪಿ-13 ಎಂದು ಗುರುತಿಸಲಾಯಿತು . ಜಾಮೀನು ಹಾಗೂ ಪೂರಕ ಭದ್ರತೆಯಿಂದ ಪಡೆದ ಸಾಲದ ಕರಾರಿನ ಯಥಾ ನಕಲನ್ನು ಹಾಜರು ಪಡಿಸಿರುತ್ತೇನೆ . ಸದರಿ ಕರಾರಿನ ಮೂಲ ಪ್ರತಿಯನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಸಾಲದ ಕರಾರಿನ ಯಥಾ ನಕಲನ್ನು ನಿಪಿ-14 ಎಂದು ಗುರುತಿಸಲಾಯಿತು .

( ಪಾಟೀ ಸವಾಲು ಕೋರಿಕೆಯ ಮೇರೆಗೆ ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಧಾನ ಪ್ರ.ದ.ನ್ಯಾದಂ., ಕುಮಟಾ.